ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2246
ಸದಸ್ಯರ ಹೆಸರು	ಶ್ರೀ ಮರಿತಿಬ್ಬೇಗೌಡ
ಉತ್ತರಿಸುವ ದಿನಾಂಕ	31-03-2020
ಉತ್ತರಿಸುವವರು	ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

	ಪ್ರಶ್ನೆಗಳು	ಉತ್ತರ
ಅ	ಕಳೆದ 3 ವರ್ಷಗಳಿಂದ ರಾಜ್ಯದಲ್ಲಿ ಉತ್ಪಾದನೆ ಮಾಡಲಾಗುತ್ತಿರುವ ರೇಷ್ಮೆ ಪ್ರಮಾಣವೆಷ್ಟು;	ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಅಂದಾಜು ಉತ್ಪಾದನೆಯಾದ ರೇಷ್ಮೆ ಪ್ರಮಾಣ ಈ ಕೆಳಕಂಡಂತಿದೆ. (ತೂಕ:ಮೆ.ಟನ್‌ಗಳಲ್ಲಿ) ಕ್ರ.ಸಂ / ವರ್ಷ / ರೇಷ್ಮೆ ಉತ್ಪಾದನೆ 1 / 2016-17 / 9571 2 / 2017-18 / 9322 3 / 2018-19 / 11592
ಆ	ಹೊರ ದೇಶದಿಂದ ರೇಷ್ಮೆ ಆಮದು ಮಾಡಿಕೊಳ್ಳಲಾಗುತ್ತಿದೆಯೇ?	"3ಎ" ಹಾಗೂ ಮೇಲ್ಪಟ್ಟ ದರ್ಜೆ ದ್ವಿತಳಿ ರೇಷ್ಮೆ ನೂಲನ್ನು ಮಾತ್ರ ಚೀನಾ ಮತ್ತು ಇತರೆ ಹೊರ ದೇಶಗಳಿಂದ ಆಮದು ಮಾಡಿಕೊಳ್ಳಲು ಅವಕಾಶವಿರುತ್ತದೆ.
ಇ	ರೇಷ್ಮೆ ಆಮದು ಮಾಡಿಕೊಳ್ಳುತ್ತಿರುವುದರಿಂದ ಸ್ಥಳೀಯ ರೇಷ್ಮೆ ಬೆಳೆಗಾರರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸ್ಥಳೀಯ ರೇಷ್ಮೆ ಬೆಳೆಗಾರರ ಮತ್ತು ರೇಷ್ಮೆ ನೂಲು ಬಿಚ್ಚಾಣಿಕೆದಾರರ ಉತ್ಪಾದನೆಯ ಮೇಲೆ ಆಗುವ ತೊಂದರೆಯನ್ನು ನಿಯಂತ್ರಿಸುವ ಸಂಬಂಧ ಮತ್ತು ಸ್ಥಳೀಯ ರೇಷ್ಮೆಗೆ ಮಾರುಕಟ್ಟೆಯನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಹೊರ ದೇಶಗಳಿಂದ "3ಎ" ದರ್ಜೆಗೂ ಕಡಿಮೆ ದರ್ಜೆಯ ರೇಷ್ಮೆಯ ಆಮದಿಗೆ ಸರ್ಕಾರದ ನಿರ್ಬಂಧ ಇರುತ್ತದೆ.
ಈ	ಇದರಿಂದಾಗಿ ರೇಷ್ಮೆ ಉತ್ಪಾದನೆಗೆ ಆಗುತ್ತಿರುವ ನಷ್ಟವೆಷ್ಟು;	3ಎ ಹಾಗೂ ಮೇಲ್ಪಟ್ಟ ದರ್ಜೆ ದ್ವಿತಳಿ ರೇಷ್ಮೆ ನೂಲಿನ ಆಮದು ಕೇವಲ ವಿದ್ಯುತ್‌ಚಾಲಿತ ಮಗ್ಗಗಳ ಬೇಡಿಕೆಗೆ ಮಾತ್ರ ಸೀಮಿತಗೊಂಡಿದ್ದು, 3ಎ ಗೂ ಕಡಿಮೆ ದರ್ಜೆಯ ದೇಶೀಯ ರೇಷ್ಮೆಗೆ ತನ್ನದೇ ಆದ ಮಾರುಕಟ್ಟೆ ಇರುವುದರಿಂದ ರೇಷ್ಮೆ ಆಮದಿನಿಂದ ದೇಶೀಯ ರೇಷ್ಮೆಗೆ ಗಣನೀಯವಾದಂತಹ ನಷ್ಟವನ್ನು ಲೆಕ್ಕಿಸುವುದು ಸಾಧ್ಯವಿರುವುದಿಲ್ಲ.
ಉ	ರೇಷ್ಮೆ ಆಮದು ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;	ಸ್ಥಳೀಯ ರೇಷ್ಮೆಗೆ ಮಾರುಕಟ್ಟೆಯನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಒಂದು ವೇಳೆ ಹೊರ ದೇಶದ ರಫ್ತುದಾರರು "3ಎ" ದರ್ಜೆಗೂ ಕಡಿಮೆ ದರ್ಜೆಯ ರೇಷ್ಮೆಯನ್ನು ಆ ದೇಶದ ಪ್ರಸ್ತುತದ ಬೆಲೆಗಿಂತಲೂ ಕಡಿಮೆ ಬೆಲೆಯಲ್ಲಿ ಒಳಸುರಿವು (dumping) ಕೈಗೊಂಡಲ್ಲಿ ಇದಕ್ಕಾಗಿ ಪ್ರತಿ ಕೆ.ಜಿ. ರೇಷ್ಮೆಯ ಮೇಲೆ 1.85 ಡಾಲರ್ 'Anti-dumping duty' ಯನ್ನು ವಿಧಿಸಲಾಗುತ್ತಿದೆ. ಇದರೊಂದಿಗೆ ರೇಷ್ಮೆ ಆಮದಿನ ಮೇಲಿನ 10% "Custom duty" ಸಹ ಚಾಲ್ತಿಯಲ್ಲಿರುತ್ತದೆ.

ಊ	ರಾಜ್ಯದ ರೇಷ್ಮೆ ಬೆಳೆಗಾರರಿಗೆ ನೀಡಲಾಗುತ್ತಿರುವ ಪ್ರೋತ್ಸಾಹದಾಯಕ ಯೋಜನೆಗಳು ಯಾವುವು?	ರಾಜ್ಯದಲ್ಲಿ ರೇಷ್ಮೆ ಉದ್ಯಮವನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಪ್ರತಿ ಸಾಲಿನಲ್ಲಿಯೂ ರೇಷ್ಮೆ ಇಲಾಖೆಯು ರೇಷ್ಮೆ ಕೃಷಿ ಮಾಡುತ್ತಿರುವ ರೈತರಿಗೆ ಈ ಕೆಳಕಂಡ ಕಾರ್ಯಕ್ರಮಗಳನ್ನು ರೂಪಿಸಿ ಸಹಾಯಧನ ಹಾಗೂ ಪ್ರೋತ್ಸಾಹಧನ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. 1. ಸುಧಾರಿತ ಹಿಪ್ಪುನೇರಳೆ ತೋಟ ಬೆಳೆಯಲು, ನರ್ಸರಿ ಬೆಳೆಸಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ ಒದಗಿಸಲಾಗುತ್ತಿದೆ. 2. ಹಿಪ್ಪುನೇರಳೆ ತೋಟಕ್ಕೆ ಟ್ರಂಚಿಂಗ್ – ಮಲ್ಚಿಂಗ್ ಮಾಡಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 3. ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಶೇ.90ರಷ್ಟು ಸಹಾಯಧನ. 4. ಹಿಪ್ಪುನೇರಳೆ ತೋಟದ ಮಣ್ಣಿನ ಫಲವತ್ತತೆಗಾಗಿ ಜೈವಿಕಗೊಬ್ಬರ ಬಳಕೆ, ಹಿಪ್ಪುನೇರಳೆ ಸೊಪ್ಪಿನ ಇಳುವರಿ ಹಾಗೂ ಗುಣಮಟ್ಟ ಹೆಚ್ಚಿಸುವ ಸಲುವಾಗಿ ಸಸ್ಯ ಸಂವರ್ಧಕ ಹಾಗೂ ಬೇರು ಕೊಳೆ ನಿಯಂತ್ರಣಕ್ಕಾಗಿ ಸಹಾಯಧನ. 5. ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಉತ್ತೇಜನಕ್ಕಾಗಿ ಸಹಾಯಧನ. 6. ರೇಷ್ಮೆ ಹುಳು ಸಾಕಾಣಿಕೆ ಮನೆ/ಮೌಂಟಿಂಗ್ ಹಾಲ್ ನಿರ್ಮಾಣಕ್ಕೆ ಸಹಾಯಧನ. 7. ಸೋಂಕು ನಿವಾರಕಗಳ ಪೂರೈಕೆ ಮತ್ತು ಸಲಕರಣೆಗಳಿಗೆ ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 8. ರೋಟರಿ ಚಂದ್ರಿಕೆಗಳ ಖರೀದಿಗೆ ಸಹಾಯಧನ 9. ದ್ವಿತಳಿ ಚಾಕಿ ವೆಚ್ಚಕ್ಕೆ ಸಹಾಯಧನ. 10. ಚಾಕಿ ಸಾಕಾಣಿಕಾ ಕೇಂದ್ರದ ಸ್ಥಾಪನೆಗೆ / ಸಲಕರಣೆಗಳಿಗೆ ಸಹಾಯಧನ. 11. ನೂತನ ತಾಂತ್ರಿಕತೆಗಳ ಅಳವಡಿಕೆಗೆ ರೈತರಿಗೆ ತರಬೇತಿ ಮತ್ತು ಕಾರ್ಯಾಗಾರ. 12. ರೇಷ್ಮೆ ಗೂಡಿನ ಧಾರಣೆ ಕುಸಿತ ಸಂದರ್ಭದಲ್ಲಿ ರೇಷ್ಮೆ ಬೆಳೆಗಾರರಿಗೆ ರಕ್ಷಣಾತ್ಮಕ ದರ ನೀಡಲಾಗುತ್ತಿದೆ. 13. ದ್ವಿತಳಿ ಬಿತ್ತನೆ ಬೆಳೆಗಾರರು ಹಾಗೂ ಮೈಸೂರು ಬಿತ್ತನೆ ಬೆಳೆಗಾರರು ಬೆಳೆಯುವ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ / ಬೋನಸ್ ನೀಡಲಾಗುತ್ತಿದೆ. 14. ರೇಷ್ಮೆ ಬಿತ್ತನೆ ಬೆಳೆಗಾರರಿಗೆ ಉತ್ಪಾದಕತೆ ಮತ್ತು ಗುಣಮಟ್ಟ ಆಧರಿಸಿ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ.

----3

		15. ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉತ್ಪಾದಿಸುವ ದ್ವಿತಳಿ ರೇಷ್ಮೆ ಗೂಡಿಗೆ ಕೆ.ಜಿ.ಗೆ ರೂ.10/-ರಂತೆ ಸಾಗಾಣಿಕೆ ವೆಚ್ಚ. ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಹಿಪ್ಪುನೇರಳೆ ನರ್ಸರಿ / ತೋಟ ಸ್ಥಾಪನೆ, ತೋಟ ನಿರ್ವಹಣೆ ಮತ್ತು ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದ್ದು, ರೈತರಿಗೆ ಕೂಲಿ/ಸಾಮಗ್ರಿ ವೆಚ್ಚವನ್ನು ಭರಿಸುವ ಮೂಲಕ ಗ್ರಾಮೀಣಾ ಪ್ರದೇಶದಲ್ಲಿ ಉದ್ಯೋಗವಕಾಶವನ್ನು ಕಲ್ಪಿಸಿ ಆರ್ಥಿಕ ಸದೃಢತೆಯನ್ನು ಒದಗಿಸಲಾಗುತ್ತಿದೆ.

ಸಂಖ್ಯೆ: ರೇಷ್ಮೆ 73 ರೇಕೃವಿ 2020

(ನಾರಾಯಣಗೌಡ)

ಪೌರಾಡಳಿತ ಹಾಗೂ ತೋಟಗಾರಿಕೆ

ಮತ್ತು ರೇಷ್ಮೆ ಸಚಿವರು